ದಿನಾಂಕ:19/09/2019 ರಂದು ಗುರುವಾರ ಬೆಳಿಗ್ಗೆ 11:00 ಗಂಟೆಗೆ ನಾಗಮಂಗಲ ತಾಲ್ಲೂಕಿನ ನಾಗಮಂಗಲ ಉಪ ವಿಭಾಗ ಕಛೇರಿ ಆವರಣದಲ್ಲಿ ನಡೆದ ಜನಸಂಪರ್ಕ ಸಭೆಯ ನಡಾವಳಿಗಳು.

ಹಾಜರಿದ್ದ ಅಧಿಕಾರಿಗಳು / ನೌಕರರು.

ಶ್ರೀ/ಶ್ರೀಮತಿ/ಕುಮಾರಿ:

1) ನಾರಾಯಣ ಕಳ್ಳಿಮನಿ : ಕಾರ್ಯನಿರ್ವಾಹಕ ಇಂಜಿನಿಯರ್(ವಿ), ನಾಗಮಂಗಲ ವಿಭಾಗ

2) ಮರಿಸ್ವಾಮಿ : ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ನಾಗಮಂಗಲ ಉಪವಿಭಾಗ

3) ಜಿ. ರಾಮಚಂದ್ರ : ಲೆಕ್ಕಾಧಿಕಾರಿ, ನಾಗಮಂಗಲ ವಿಭಾಗ

4) ರವಿಕುಮಾರ : ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ತಾಂ), ನಾಗಮಂಗಲ ವಿಭಾಗ

5) ಡಿ.ನಟರಾಜು : ಪ್ರಭಾರ ಸಹಾಯಕ ಇಂಜಿನಿಯರ್(ವಿ), ನಾಗಮಂಗಲ ಶಾಖೆ

6) ಬೀರಪ್ಪ : ಕಿರಿಯ ಇಂಜಿನಿಯರ್(ವಿ), ದೇವಲಾಪುರ ಶಾಖೆ

7) ಲಕ್ಷ್ಮಿ : ಪ್ರಭಾರ ಕಿರಿಯ ಇಂಜಿನಿಯರ್(ವಿ), ಚೀಣ್ಯ ಶಾಖೆ

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ ಉಪವಿಭಾಗ ನಾಗಮಂಗಲ ರವರು ಸಭೆಗೆ ಹಾಜರಿದ್ದ ಎಲ್ಲಾ ಅಧಿಕಾರಿ/ ನೌಕರರನ್ನು ಹಾಗೂ ವಿದ್ಯುತ್ ಗ್ರಾಹಕರನ್ನು ಸ್ವಾಗತಿಸಿದರು.

ವಿದ್ಯುತ್ ಗ್ರಾಹಕರ ಕುಂದು ಕೊರತೆಗಳನ್ನು ಆಲಿಸಿ ಬಗೆಹರಿಸುವ ನಿಟ್ಟಿನಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಜನ ಸಂಪರ್ಕ ಸಭೆಯನ್ನು ನಡೆಸುವಂತೆ ಕೆ.ಇ.ಆರ್.ಸಿ ರವರಿಂದ ಆದೇಶವಾಗಿರುತ್ತದೆ. ವಿದ್ಯುತ್ ದರವನ್ನು ಪರಿಷ್ಕರಿಸುವ ಸಂದರ್ಭದಲ್ಲಿ ವಿದ್ಯುತ್ ಬಳಕೆದಾರರ ಒಪ್ಪಿಗೆಯ ಅವಶ್ಯಕತೆ ಇರುತ್ತದೆ. ಶಾಖಾಧಿಕಾರಿಗಳು ವಿದ್ಯುತ್ ಬಳಕೆದಾರರ ಸಮಸ್ಯೆಗಳಿಗೆ ಸ್ಪಂದಿಸುವ ಕುರಿತು ಹಾಗೂ ಗ್ರಾಹಕರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಸೆಸ್ಕ್ ಕಾರ್ಯ ಮತ್ತು ಪಾಲನಾ ವೃತ್ತ, ಮಂಡ್ಯ ರವರು ವಿದ್ಯುತ್ ಸಂಬಂಧಿತ ದೂರುಗಳನ್ನು ಮೌಖಿಕವಾಗಿ / ಲಿಖಿತವಾಗಿ ಸಲ್ಲಿಸುವಂತೆ ವಿದ್ಯುತ್ ಗ್ರಾಹಕರಲ್ಲಿ / ಸಾರ್ವಜನಿಕರಲ್ಲಿ ಕೇಳಲಾಯಿತು.

ಈ ಹಿಂದಿನ ಸಭೆಯಲ್ಲಿ ನೀಡಲಾದ ದೂರುಗಳನ್ನು ಹಾಗೂ ಅದರ ಬಗ್ಗೆ ತೆಗೆದುಕೊಂಡ ಕ್ರಮಗಳನ್ನು ಮೊದಲು ಪರಿಶೀಲಿಸಲಾಯಿತು. ಎಲ್ಲಾ ದೂರುಗಳನ್ನು ಪರಿಹರಿಸಿರುವುದಾಗಿ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ರವರು ತಿಳಿಸಿದರು.

1)ಶ್ರೀ. ತಮ್ಮಣ್ಣಗೌಡ ನಾಗಮಂಗಲ ಮೊಬೈಲ್ ನಂ:-9141734225

ದೂರು:- ಅಕ್ರಮ ಸಕ್ರಮ ಯೋಜನೆಯಡಿಯಲ್ಲಿ ಹಣ ಪಾವತಿ ಮಾಡಿ ಸಕ್ರಮೀಕರಣಗೊಂಡಿದ್ದು, ಇದುವರೆಗೆ ಮೂಲಭೂತ ಸೌಕರ್ಯ ಕಲ್ಪಿಸಿರುವುದಿಲ್ಲ. ಗುತ್ತಿಗೆ ನೀಡಲಾದ ಏಜೆನ್ಸಿಯವರಿಗೆ ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಬೇಕಾಗಿ ಕೋರಿದರು.

ಕ್ರಮ:- ಗುತ್ತಿಗೆ ನೀಡಲಾದ ಏಜೆನ್ಸಿಯವರಿಗೆ ವಿಭಾಗದಿಂದ ಅವಾರ್ಡ್ ನೀಡಲಾಗಿದು ಶ್ರೀ ನಂಜುಂಡೇಶ್ವರ ಎಲೆಕ್ಟ್ರಿಕಲ್ಸ್‌ರವರ ಗುತ್ತಿಗೆ ಅವಧಿ ಪೂರ್ಣಗೊಂಡಿದ್ದು, ಹೊಸದಾಗಿ ಟೇಂಡರ್ ನೀಡಿರುವ ಗುತ್ತಿಗೆದಾರರಿಗೆ ಬಾಕಿ ಉಳಿದಿರುವ ಕಾಮಗಾರಿಗಳ ಕಾರ್ಯ ಪ್ರಧಾನ ನೀಡಿ ಶೀಘ್ರವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಆದೇಶಿಸಿದರು.

Scanned by CamScanner

Scanned by CamScanner

**2)ಶ್ರೀ ಎಸ್.ಶಿವರಾಜು ನಾಗಮಂಗಲ ಮೊಬೈಲ್ ನಂ:-9844960233**

ದೂರು:- ಗಂಗಸಮುದ್ರ ವ್ಯಾಪ್ತಿಯ ರೈತರ ಐ.ಪಿ ಸೆಟ್‌ಗಳಿಗೆ 4 ಗಂಟೆ ವಿದ್ಯುತ್ ಸಂಪರ್ಕ ನೀಡುವಂತೆ ಮನವಿ ಮಾಡಿರುತ್ತಾರೆ.

ಕ್ರಮ:- ಬಿಂಡಿಗನವಿಲೆ ಫೀಡರ್ ಅಧಿಕ ಭಾರವಾಗಿದ್ದು ಹೊಸ ಲಿಂಕ್ ಲೈನ್ ಕಾಮಗಾರಿಗೆ ಅಂದಾಜುಪಟ್ಟಿ ತಯಾರಿಸಿದ್ದು ಹೊಸದಾಗಿ ಟೇಂಡರ್ ನೀಡಿರುವ ಗುತ್ತಿಗೆದಾರರಿಗೆ ಕಾರ್ಯ ಪ್ರಧಾನ ನೀಡಿ ಕಾಮಗಾರಿಗಳನ್ನು ತುರ್ತಾಗಿ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ.

**3)ಎನ್.ಬೋರಯ್ಯ ತಟ್ಟಹಳ್ಳಿ ಮೊಬೈಲ್ 9141673432**

ದೂರು:- ಅಕ್ರಮ ಸಕ್ರಮ ಯೋಜನೆಯಡಿಯಲ್ಲಿ ಹಣ ಪಾವತಿ ಮಾಡಿ ಸಕ್ರಮೀಕರಣಗೊಂಡಿದ್ದು, ಇದುವರೆಗೆ ಮೂಲಭೂತ ಸೌಕರ್ಯ ಕಲ್ಪಿಸಿರುವುದಿಲ್ಲ. ತಾವು ಅಳವಡಿಸಿದ್ದ ಲೀಡ್ ವೈರ್ ತುಂಡಾಗಿದ್ದು, ಸರಿಪಡಿಸುವಂತೆ ಕೋರಿದರು.

ಕ್ರಮ:- ಈಗಾಗಲೇ ತಿಳಿಸಿರುವಂತೆ ಗುತ್ತಿಗೆದಾರರು ಒಂದು ವಾರದಲ್ಲಿ ಕಾಮಗಾರಿಯನ್ನು ಪ್ರಾರಂಭಿಸುತ್ತಿದ್ದು, ಶೀಘ್ರವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸುವುದಾಗಿ ತಿಳಿಸಿದರು.

**4)ನಾಗೇಶ ತೊಳಲಿ ಮೊಬೈಲ್ 9035206061**

ದೂರು:- ಅಕ್ರಮ ಸಕ್ರಮ ಯೋಜನೆಯಡಿಯಲ್ಲಿ ಹಣ ಪಾವತಿ ಮಾಡಿ ಸಕ್ರಮೀಕರಣಗೊಂಡಿರುವ ಸ್ಥಾವರಗಳಿಗೆ ಇದುವರೆಗೆ ಮೂಲಭೂತ ಸೌಕರ್ಯ ಕಲ್ಪಿಸಿರುವುದಿಲ್ಲ. ಗುತ್ತಿಗೆ ನೀಡಲಾದ ಏಜೆನ್ಸಿಯವರು ಕಾಮಗಾರಿಗಳನ್ನು ನಿರ್ವಹಿಸುತ್ತಿರುವುದಿಲ್ಲ. ಆದ್ದರಿಂದ ಶೀಘ್ರವಾಗಿ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚಿಸಬೇಕಾಗಿ ಕೋರಿದರು.

ಕ್ರಮ:- ಈಗಾಗಲೇ ತಿಳಿಸಿರುವಂತೆ ಗುತ್ತಿಗೆದಾರರು ಒಂದು ವಾರದಲ್ಲಿ ಕಾಮಗಾರಿಯನ್ನು ಪ್ರಾರಂಭಿಸುತ್ತಿದ್ದು, ಶೀಘ್ರವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸುವುದಾಗಿ ತಿಳಿಸಿದರು.

ಮೇಲ್ಕಂಡ ದೂರುಗಳಿಗೆ ತೆಗೆದುಕೊಂಡ ಕ್ರಮಗಳ ಬಗ್ಗೆ ಅನುಪಾಲನಾ ವರದಿಯನ್ನು ಮುಂದಿನ ಜನಸಂಪರ್ಕ ಸಭೆಯಲ್ಲಿ ಹಾಜರುಪಡಿಸುವಂತೆ ಉಪವಿಭಾಗಾಧಿಕಾರಿಗಳಿಗೆ ಸೂಚಿಸಲಾಯಿತು.

ಪ್ರಭಾರ ಸಹಾಯಕ ಇಂಜಿನಿಯರ್(ವಿ), ನಾಗಮಂಗಲ ಶಾಖೆರವರು ಸಭೆಯಲ್ಲಿ ಭಾಗವಹಿಸಿದ್ದ ಎಲ್ಲ ಅಧಿಕಾರಿಗಳು/ನೌಕರರು ಹಾಗೂ ಗ್ರಾಹಕರುಗಳಿಗೆ ವಂದನಾರ್ಪಣೆ ಸಲ್ಲಿಸಿದ ನಂತರ ಸಭೆಯನ್ನು ಮಧ್ಯಾಹ್ನ 01:30 ಗಂಟೆ ಮುಕ್ತಾಯಗೊಳಿಸಲಾಯಿತು.

ದೂರನ್ನು ನೀಡಿದ ಗ್ರಾಹಕರ ಸಂಖ್ಯೆ-4

ಒಟ್ಟು ದೂರು/ಸಮಸ್ಯೆಗಳು- 4

ಮೆಮೊ ಸಂಖ್ಯೆ:ಸಕಾನಿಇಂ(ವಿ)/ಸಇಂ(ತಾ)/ನಾ/19-20/ 1421 ದಿನಾಂಕ: 20/9/18

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ),
ಚಾ.ವಿ.ಸ.ನಿ.ನಿ, ಕಾ ಮತ್ತು ಪಾ ಉಪ ವಿಭಾಗ,
ನಾಗಮಂಗಲ.

Scanned by CamScanner

Scanned by CamScanner